ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1234 (1272)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ವಸತಿ ಸಚಿವರು

ವಿಷಯ : ಆಶ್ರಯ ಯೋಜನೆಯ ಬಗ್ಗೆ

(ಅ) 2019-20 ಮತ್ತು 2020-21 ನೇ ಸಾಲಿನಲ್ಲಿ ಹುಬ್ಬಳ್ಳಿ-ಧಾರವಾಡ ನಗರ ವ್ಯಾಪ್ತಿಯಲ್ಲಿ ಬರುವಂತಹ ಆರ್ಥಿಕವಾಗಿ ಹಿಂದುಳಿದ ವರ್ಗದ ಜನರಿಗೆ ಆಶ್ರಯ ಯೋಜನೆಯಡಿ ಮನೆಗಳನ್ನು ನಿರ್ಮಾಣ ಮಾಡಲು ಬಿಡುಗಡೆಯಾದಂತಹ ಅನುದಾನವೆಷ್ಟು ;

(ಆ) ಅನುದಾನವನ್ನು ವೆಚ್ಚ ಮಾಡಲಾಗಿರುವ ಪ್ರಮಾಣ ವೆಷ್ಟು ; ಮತ್ತು ಕೈಗೊಂಡಿರುವಂತಹ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಇ) ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯೋಜನೆಯ ಅನುಷ್ಠಾನಕ್ಕೆ ವಿಳಂಬ ಮಾಡಿರುವಂತಹ ಹಾಗೂ ವಿಫಲವಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?